# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಡಿ.ಹೆಚ್.ಶಂಕರಮೂರ್ತಿ, ವಿಧಾನ ಪರಿಷತ್ ಸದಸ್ಯರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ ಪಿಡಿ 10 ಎಸ್‌ಪಿಬಿ 2005(ಪಿ)
ದಿನಾಂಕ 5ನೇ ಡಿಸೆಂಬರ್ 2007.

ಓದಲಾಗಿದೆ:

ಮೇಲೆ ಓದಲಾದ ಸರ್ಕಾರೀ ಆದೇಶದಲ್ಲಿ ಡಾ: ಎಸ್.ಎಸ್. ಮೀನಾಕ್ಷಿಸುಂದರಂ ಐಎಎಸ್(ನಿವೃತ್ತ) ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿತ್ತು. ಡಾ: ಎಸ್.ಎಸ್. ಮೀನಾಕ್ಷಿಸುಂದರಂ, ಐಎಎಸ್(ನಿವೃತ್ತ) ಇವರು ದಿನಾಂಕ 31.05.2008 ರಂದು ರಾಜ್ಯ ಯೋಜನಾ ಮಂಡಳಿಯ ಮಾನ್ಯ ಉಪಾಧ್ಯಕ್ಷರ ಹುದ್ದೆಗೆ ರಾಜೀನಾಮೆಯನ್ನು ಸಲ್ಲಿಸಿರುತ್ತಾರೆ. ಸದರಿಯವರ ರಾಜೀನಾಮೆಯನ್ನು ಮುಖ್ಯಮಂತ್ರಿಗಳು ಅಂಗೀಕರಿಸಿದ್ದು, ಶ್ರೀ ಡಿ.ಹೆಚ್. ಶಂಕರಮೂರ್ತಿ, ವಿಧಾನ ಪರಿಷತ್ ಸದಸ್ಯರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಿಸಲು ಆದೇಶಿಸಿರುತ್ತಾರೆ.

ಅದರಂತೆ ಈ ಕೆಳಕಂಡ ಆದೇಶ

## ಸರ್ಕಾರಿ ಆದೇಶ ಸಂಖ್ಯೆ ಪಿಡಿ 38 ಎಸ್‌ಪಿಬಿ 2008
## ಬೆಂಗಳೂರು, ದಿನಾಂಕ 09-06-2008

ಶ್ರೀ ಡಿ.ಹೆಚ್.ಶಂಕರಮೂರ್ತಿ, ವಿಧಾನ ಪರಿಷತ್ ಸದಸ್ಯರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ತಕ್ಷಣದಿಂದ ಮತ್ತು ಮುಂದಿನ ಆದೇಶದವರೆಗೆ ನೇಮಿಸಿ ಆದೇಶ ಹೊರಡಿಸಲಾಗಿದೆ. ಸದರಿಯವರಿಗೆ ಸಂಪುಟ ದರ್ಜೆಯ ಸಚಿವರ ಸ್ಥಾನಮಾನವನ್ನು ನೀಡಬಹುದಾಗಿದೆ. ನಿಬಂಧನೆ ಮತ್ತು ಷರತ್ತುಗಳ ಬಗ್ಗೆ ಆದೇಶವನ್ನು ನಂತರ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗು ಅವರ ಹೆಸರಿನಲ್ಲಿ
9/6/08
(ಉಷಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

......2

2. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ,ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
5. ಶ್ರೀ ಡಿ ಹೆಚ್ ಶಂಕರಮೂರ್ತಿ, ವಿಧಾನ ಪರಿಷತ್ ಸದಸ್ಯರು.
6. ಡಾ: ಎಸ್.ಎಸ್ ಮೀನಾಕ್ಷಿ ಸುಂದರಂ,ಐಎಎಸ್,(ನಿವೃತ್ತ).
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು:ಕಾರ್ಯದರ್ಶಿಗಳು.
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
9. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಯೋಜನಾ ಇಲಾಖೆ.
10. ಬಿಡಿ ಪ್ರತಿಗಳು:ಶಾಖಾ ರಕ್ಷಾ ಕಡತ.